ಸಂವಿಧಾನ ಅಧ್ಯಯನವನ್ನು ಪದವಿ ತರಗತಿಗಳಿಗೆ ಕಡ್ಡಾಯಗೊಳಿಸುವುದು

1215(491) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು, (ಶಿವಾಜಿನಗರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಯಾವ-ಯಾವ ವಿಶ್ವವಿದ್ಯಾಲಯಗಳು ಸಂವಿಧಾನ ಅಧ್ಯಯನವನ್ನು ಪದವಿ ತರಗತಿಗಳಿಗೆ ಕಡ್ಡಾಯಗೊಳಿಸಿವೆ;

ಆ) ಸಂವಿಧಾನ ವಿಷಯವನ್ನು ಪದವಿ ತರಗತಿಗಳಿಗೆ ಕಡ್ಡಾಯಗೊಳಿಸಲು ಕಾರಣಗಳೇನು;

ಡಾ।। ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) 1) ಮೈಸೂರು ವಿಶ್ವವಿದ್ಯಾಲಯ

2) ಕುವೆಂಪು ವಿಶ್ವವಿದ್ಯಾಲಯ

3) ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

ಉಳಿದ ವಿಶ್ವವಿದ್ಯಾಲಯಗಳು ಈ ಬಗ್ಗೆ ಕ್ರಮ ಕೈಗೊಳ್ಳುತ್ತಿವೆ.

ಆ) ಸಂವಿಧಾನದ ಅಧ್ಯಯನವು ವಿದ್ಯಾರ್ಥಿಗಳಲ್ಲಿ ಅವರ ಹಕ್ಕು ಮತ್ತು ಕರ್ತವ್ಯಗಳ ಪ್ರಜ್ಞೆಯನ್ನು ನಾಗರೀಕವಾಗಿ ಮತ್ತು ವ್ಯಕ್ತಗತವಾಗಿ ರೂಢಿಸಲು ಅನುವಾಗುತ್ತದೆ.

ಹಂಪಿ ಕನ್ನಡ ವಿಶ್ವವಿದ್ಯಾಲಯದಿಂದ ಕನ್ನಡ ಚಲನಚಿತ್ರ ಇತಿಹಾಸಕ್ಕೆ ಸಂಬಂಧಿಸದಂತೆ ಸಂಪುಟಗಳನ್ನು ಪ್ರಕಟಗೊಳಿಸಿರುವುದು

1217(1376) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು, (ಶಿವಾಜಿನಗರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಂಪಿ ಕನ್ನಡ ವಿಶ್ವವಿದ್ಯಾಲಯವು ಕನ್ನಡ ಚಲನಚಿತ್ರ ಇತಿಹಾಸಕ್ಕೆ ಸಂಬಂಧಿಸಿದಂತೆ ಎರಡು ಸಂಪುಟಗಳನ್ನು ಪ್ರಕಟಿಸಿದೆಯೇ;

ಆ) ಹಾಗಿದ್ದಲ್ಲಿ, ಈ ಸಂಪುಟಗಳಲ್ಲಿ ಚಲನಚಿತ್ರ ಇತಿಹಾಸವನ್ನು ತಿರುಚುವ ರೀತಿಯಲ್ಲಿ ಕೆಲವು ಘಟನೆಗಳು ಪ್ರಕಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು?

ಡಾ।। ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು

ಆ) ಹೌದು

ಇ) ಕನ್ನಡ ವಿಶ್ವವಿದ್ಯಾಲಯವು ಪ್ರಸ್ತಕಗಳ ಮಾರಾಟವನ್ನು ಸ್ಥಗಿತಗೊಳಿಸಿದೆ.

ಬೈಲಹೊಂಗಲ ತಾಲ್ಲೂಕಿನ ನಯಾನಗರ ಹಾಗೂ ಕೆಂಗಾನೂರುನಲ್ಲಿ ಸರ್ಕಾರಿ ಪ್ರೌಢ ಶಾಲೆಯ ಕಟ್ಟಡ ಕಟ್ಟುವುದು

1218 (1560) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ನಯಾನಗರ ಹಾಗೂ ಕೆಂಗನೂರ ಗ್ರಾಮಗಳು ಮಲಪ್ರಭ ಯೋಜನೆಯಡಿಯಲ್ಲಿ ಮುಳುಗಡೆಯಾದ ಸಂಗತಿ ನಿಜವೇ?

ಆ) ಈ ಮುಳುಗಡೆ ಪ್ರದೇಶದ ಜನರ ಅನುಕೂಲತೆಗಾಗಿ ಕಾರ್ಯಕಾರಿ ಅಭಿಯಂತರರು ನೀರಾವರಿ ಇಲಾಖೆ ಮಲಪ್ರಭಾ ಎಡದಂಡೆ ಕಾಲುವೆ ನಿರ್ಮಾಣ ವಿಭಾಗ ನವಿಲುತೀರ್ಥ ಇವರು 07 ಕೋಣೆಯ ಸರ್ಕಾರಿ ಕನ್ನಡ ಪ್ರಾಥಮಿಕ ಶಾಲಾ ಕೊಠಡಿಗಳನ್ನು ಕೆಂಗಾನೂರ ಹಾಗೂ ನಂತಾನಗರ ಗ್ರಾಮಗಳಲ್ಲಿ ಕಟ್ಟಿರುವ ಸಂಗತಿ ನಿಜವೇ;

ಇ) ಈ 07 ಕೋಣೆಯ ಸರ್ಕಾರಿ ಕನ್ನಡ ಪ್ರಾಥಮಿಕ ಶಾಲಾ ಕೊಠಡಿಗಳಲ್ಲಿ ಸರ್ಕಾರಿ ಪ್ರೌಢಶಾಲೆ ನಡೆಯುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ ಕೂಡಲೇ ಇಲ್ಲಿ ಸರ್ಕಾರಿ ಪ್ರೌಢಶಾಲೆಯ ಕಟ್ಟಡಗಳನ್ನು ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ?

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಹೌದು.

ಆ) ಹೌದು.

ಇ) ಹೌದು

ಶಾಲಾ ಕಟ್ಟಡದ ಕೊರತೆಯಿಂದ ಪ್ರಾಥಮಿಕ ಶಾಲಾ ಕಟ್ಟಡದಲ್ಲಿ ಕೆಂಗಾನೂರು ಗ್ರಾಮದ ಹೈಸ್ಕೂಲ್ ನಡೆಯುತ್ತಿದೆ. ಪ್ರಾಥಮಿಕ ಶಾಲೆ ಪ್ರತ್ಯೇಕವಾಗಿ ಬೇರೆ ಕಟ್ಟಡದಲ್ಲಿ ನಡೆಯುತ್ತಿದೆ. ನಯಾನಗರದಲ್ಲಿ ಮಾತ್ರ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಒಂದೇ ಕಟ್ಟಡದಲ್ಲಿ ನಡೆಯುತ್ತಿದೆ.

ಈ) ಅನುದಾನದ ಲಭ್ಯತೆಯನ್ನು ಗಮನದಲ್ಲಿಟ್ಟುಕೊಂಡು ಕಟ್ಟಡ ನಿರ್ಮಿಸುವ ಬಗ್ಗೆ ಪರಿಶೀಲಿಸಲಾಗುವುದು.

ಹೊಸದಾಗಿ ವೈದ್ಯಕೀಯ ಕಾಲೇಜುಗಳ ಪ್ರಾರಂಭ

1220 (1569) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಹೊಸ ವೈದ್ಯಕೀಯ ಕಾಲೇಜುಗಳನ್ನು ತೆರೆಯಲು ಅನುಮತಿ ನೀಡಲಾಗುವುದೇ?

ಆ) ಹೊಸ ವೈದ್ಯಕೀಯ ಕಾಲೇಜು ಪ್ರಾರಂಭಿಸಲು ಸರ್ಕಾರದ ಧ್ಯೇಯ-ಧೋರಣೆಗಳು ಯಾವುವು?